SRI DEVARAJ URS ACADEMY OF HIGHER EDUCATION & RESEARCH
SRI DEVARAJ URS MEDICAL COLLEGE
Tamaka, Kolar

UNIVERSITY LIBRARY & LEARNING RESOURCE CENTRE

Online Newspaper Clipping Service

ವಿಜಯ ಕರ್ನಾಟಕ

**Dtd-Thursday, 12th, October– 2017** **Pg.No.06**

### ಸಚಿವ ಸಂಪುಟದ ಮಹತ್ವದ ನಿರ್ಧಾರ

# ವೈದ್ಯರ ಕೊರತೆ ನಿವಾರಣೆಗೆ ಡಿಎನ್‌ಬಿ ಕೋರ್ಸ್

**ಬೆಂಗಳೂರು:** ಆರೋಗ್ಯ ಇಲಾಖೆ ವ್ಯಾಪ್ತಿಯಲ್ಲಿ ತಜ್ಞ ವೈದ್ಯರ ಕೊರತೆ ನಿವಾರಿಸಲು ಹಾಲಿ ಸೇವಾ ನಿರತ ವೈದ್ಯರಿಗೇ ಉನ್ನತ ಶಿಕ್ಷಣ ನೀಡಲು ತೀರ್ಮಾನಿಸಲಾಗಿದೆ. ಅದಕ್ಕಾಗಿ 10 ಜಿಲ್ಲಾಸ್ಪತ್ರೆಗಳಲ್ಲಿ ಪ್ರಸಕ್ತ ಶೈಕ್ಷಣಿಕ ವರ್ಷದಿಂದಲೇ ಡಿಎನ್‌ಬಿ (ಡಿಪ್ಲೊಮೇಟ್ ಇನ್ ನ್ಯಾಷನಲ್ ಬೋರ್ಡ್) ಕೋರ್ಸ್‌ಗಳನ್ನು ಆರಂಭಿಸಲು ಒಪ್ಪಿಗೆ ನೀಡಿತು.

"ಬಳ್ಳಾರಿ, ಬಾಗಲಕೋಟ, ಚಿತ್ರದುರ್ಗ, ಧಾರವಾಡ, ಕೋಲಾರ, ಕಲಬುರಗಿ, ತುಮಕೂರು, ವಿಜಯಪುರ ಜಿಲ್ಲಾಸ್ಪತ್ರೆಗಳು ಹಾಗೂ ಬೆಂಗಳೂರಿನ ಕೆ.ಸಿ.ಜನರಲ್ ಆಸ್ಪತ್ರೆ ಹಾಗೂ ಜಯನಗರ ಸಾರ್ವಜನಿಕ ಆಸ್ಪತ್ರೆಗಳಲ್ಲಿ ಈ ಡಿಪ್ಲೊಮಾ ಕೋರ್ಸ್‌ಗಳನ್ನು ಆರಂಭಿಸಲು ಸಿಎಂ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ಬುಧವಾರ ನಡೆದ ಸಚಿವ ಸಂಪುಟ ಸಭೆ ನಿರ್ಧರಿಸಿತು.

ವಿಜಯವಾಣಿ



# ಆಸ್ಪತ್ರೆಗಳಲ್ಲಿ ಸಂಜೆ ಸೇವೆಗೆ ಖಾಸಗಿ ವೈದ್ಯರ ನೇಮಕ

ವಿಜಯವಾಣಿ ಸುದ್ದಿಜಾಲ ಬೆಂಗಳೂರು

ರಾಷ್ಟ್ರೀಯ ನಗರ ಆರೋಗ್ಯ ಅಭಿಯಾನದಡಿ ನಗರ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿನ ಸಂಜೆ ಸೇವೆಗಾಗಿ ಖಾಸಗಿ ವೈದ್ಯರ ನೇಮಕಕ್ಕೆ ಪ್ರಥಮ ಆದ್ಯತೆ ನೀಡುವಂತೆ ಸರ್ಕಾರ ಆದೇಶಿಸಿದೆ.



» ಸರ್ಕಾರದಿಂದ ಅಧಿಕೃತ ಆದೇಶ

ನಗರದ ಪ್ರದೇಶಗಳಲ್ಲಿ ಕೆಲಸಕ್ಕೆ ಹೋಗುವವರ ಸಂಖ್ಯೆ (ಕೂಲಿ ಕಾರ್ಮಿಕರು, ಕಾರ್ಖಾನೆ ನೌಕರರು ಮತ್ತಿತರರು) ಹೆಚ್ಚಿದ್ದು, ಇವರಿಗೆ ದಿನದ ವೇಳೆ ಆರೋಗ್ಯ ಸೇವೆ ಪಡೆಯಲು ಸಾಧ್ಯವಾಗುವುದಿಲ್ಲ. ಹೀಗಾಗಿ ಸಂಜೆ 5ರಿಂದ ರಾತ್ರಿ 8ರವರೆಗೆ ನಗರ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ವೈದ್ಯಕೀಯ ಸೇವೆ ಪಡೆಯಬಹುದಾಗಿದೆ. ರಾಜ್ಯದ 364 ನಗರ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಪೈಕಿ ಶೇ.20ರಲ್ಲಿ ವೈದ್ಯರ ಹುದ್ದೆ ಭರ್ತಿಯಾಗಿಲ್ಲ. ಹೀಗಾಗಿ ರೋಗಿಗಳಿಗೆ ಗುಣಮಟ್ಟದ ಸೇವೆ ನೀಡಲಾಗುತ್ತಿಲ್ಲ. ಹೀಗಾಗಿ ಕೇಂದ್ರಗಳಲ್ಲಿ ಖಾಸಗಿ ವೈದ್ಯರಿಗೆ ಮೊದಲ ಆದ್ಯತೆ ನೀಡಬೇಕು ಎಂದು ಆದೇಶಿಸಲಾಗಿದೆ.

ಖಾಸಗಿ ವೈದ್ಯರ ಅಲಭ್ಯತೆ ಸಂದರ್ಭದಲ್ಲಿ ಮಾತ್ರ ಸರ್ಕಾರಿ ವೈದ್ಯರು ಸೇವೆ ನೀಡಬೇಕು. ಈ ವೇಳೆ ಸರ್ಕಾರಿ ವೈದ್ಯರಿಗೆ ರಾಷ್ಟ್ರೀಯ ನಗರ ಆರೋಗ್ಯ ಅಭಿಯಾನದ ಮಾರ್ಗಸೂಚಿ ಅನ್ವಯ ಗಂಟೆಗೆ 200 ರೂ. ಅಥವಾ ದಿನಕ್ಕೆ 600 ರೂ. ಸಂಭಾವನೆ ನೀಡುವಂತೆ ಸರ್ಕಾರ ಆದೇಶಿಸಿದೆ.

ಖಾಸಗಿ ವೈದ್ಯರ ಅಲಭ್ಯತೆ ವೇಳೆ ಆಯಾ ಜಿಲ್ಲಾ ಹಾಗೂ ತಾಲೂಕು ಆಸ್ಪತ್ರೆಗಳಲ್ಲಿ ಕರ್ತವ್ಯ ನಿರ್ವಹಿಸುವ ವೈದ್ಯರನ್ನು ಒಂದು ದಿನಕ್ಕೆ ನೇಮಿಸಲಾಗುತ್ತದೆ. ಇದಕ್ಕಾಗಿ ನಿಗದಿತ ಶುಲ್ಕ ಪಾವತಿಸಲಾಗುತ್ತದೆ ಎಂದು ಆದೇಶದಲ್ಲಿ ಹೇಳಲಾಗಿದೆ.